**1 ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.**

**ಸಿ.ಸಿ. ಸಂಖ್ಯೆ: 390/ 2021**

**ಸಾಕ್ಷಿಯನ್ನು ದಿಃ 22.05.2026 ರಂದು ಕರೆಸಿ ಪ್ರಮಾಣವಚನ ಭೋದಿಸಲಾಯಿತು.**

| | | | |
|---|---|---|---|
| ಹೆಸರು | ಮಹದೇವ | ಸಿಡಬ್ಲ್ಯೂ:04 | ಪಿಡಬ್ಲ್ಯೂ:04 |
| ತಂದೆಯ ಹೆಸರು | ಲೇಟ್ ಚಲುವಯ್ಯ | | |
| ವಯಸ್ಸು | 55 ವರ್ಷ | | |
| ಉದ್ಯೋಗ | ಚಾಲಕ. | | |
| ವಾಸಸ್ಥಳ | ನಿಲುವಾಗಿಲು ಕೊಪ್ಪಲು ,<br>ಹುಣಸೂರು ತಾಲ್ಲೂಕು. | | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ**

ಸಾಕ್ಷಿಗೆ ನಿಪಿ–3 ಸ್ಥಳ ಮಹಜರನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸದರಿ ಸಹಿಯನ್ನು ನಿಪಿ–3 ಸಿ ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಈಗ್ಗೆ 5 ವರ್ಷಗಳ ಹಿಂದೆ ಪಟ್ಟಣ ಪೊಲೀಸ್ ಠಾಣೆಯ ಹತ್ತಿರ ಪೊಲೀಸರು ಹೇಳಿದ ಮೇರೆಗೆ ಮಾಡಿರುತ್ತೇನೆ. ನಾನು ಸಹಿ ಮಾಡಿದಾಗ ನನ್ನ ಜೊತೆ ಬೇರೆ ಯಾರು ಇರಲಿಲ್ಲ. ಸಹಿ ಮಾಡಿದಾಗ ಸಮಯ ರಾತ್ರಿ 7.30 ಯಿಂದ 8.00 ಗಂಟೆ ಆಗಿತ್ತು.

**(ಈ ಹಂತದಲ್ಲಿ ಮಾನ್ಯ ಸಸಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿ ತನ್ನ ಸಾಕ್ಷ್ಯವನ್ನು ಅಭಿಯೋಜನೆಗೆ ಪ್ರತಿಕೂಲವಾಗಿ ನುಡಿದಿರುವ ಕಾರಣ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಸಲಾಯಿತು).**

**<u>ಪಾಟೀಸವಾಲು ಸಸಅ ರವರಿಂದಃ-</u>**

ದಿನಾಂಕಃ 16.01.2021 ರಂದು ಹುಣಸೂರು ನಗರ ಸಭೆ ಮೈದಾನದ ಮುಂದಿನ ಎಸ್ ಜೆ ರಸ್ತೆಯಲ್ಲಿ ನಾನು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಸಹಿ ಮಾಡುವಾಗ ಚಾಸಾ-1 ಮತ್ತು 2 ರವರು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆಗ ಸಮಯ ಬೆಳಿಗ್ಗೆ 10 ರಿಂದ 11.00 ಗಂಟೆ ಆಗಿತ್ತು. ಚಾಸಾ-1 ಮತ್ತು ಆರೋಪಿಯ ನಡುವೆ ಆದ ಜಗಳದ ವಿಚಾರ ಗೊತ್ತಿದ್ದರುೂ ಸಹ ನಿಪಿ-3 ಕ್ಕೆ ಸಹಿ ಮಾಡಿದ್ದರು ನಾನು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಂ ಆರ್ ಹೆಚ್ ವಕೀಲರಿಂದಃ</u>**

ಇಲ್ಲ ವೆಂದು ತಿಳಿಸಿರುತ್ತಾರೆ.

**ಮರುವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.,

(ಭಾಗ್ಯಮ್ಮ)
1 ನೇ ಹೆಚ್ಚುವರಿ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆ.ಎಂ.ಎಫ್.ಸಿ.ಹುಣಸೂರು.